ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 21ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

--

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು:–

ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ವಿಧೇಯಕ (2021ರ ವಿಧಾನಸಭೆಯ ವಿಧೇಯಕ ಸಂಖ್ಯೆ–50) ಅನ್ನು ಸಭೆಯ ಮುಂದಿಡುವುದು.

3. ವರದಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಕುಮಾರಸ್ವಾಮಿ (ಅಧ್ಯಕ್ಷರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಐದನೇ ವರದಿಯನ್ನೊಪ್ಪಿಸುವುದು.

4. ವಿತ್ತೀಯ ಕಾರ್ಯಕಲಾಪ

ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:–

2022–23ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಬೇಡಿಕೆಗಳನ್ನು ಮಂಡಿಸುವುದು.

5. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2022ನೇ ಸಾಲಿನ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಡಾ. ಅಶ್ವಥ್ ನಾರಾಯಣ ಸಿ.ಎನ್. (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

III. ವಿಧೇಯಕವನ್ನು ಪುನರ್ ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:–

ಅ) ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ವಿಧೇಯಕ (2021ರ ವಿಧಾನಸಭೆಯ ವಿಧೇಯಕ ಸಂಖ್ಯೆ–50) ಅನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಕೃಷ್ಣಬೈರೇಗೌಡ, ಎ.ಟಿ. ರಾಮಸ್ವಾಮಿ ಮತ್ತು ಈಶ್ವರ್ ಭೀಮಣ್ಣ ಖಂಡ್ರೆ ಇವರುಗಳು** – ಬೆಂಗಳೂರು ನಗರ ಜಿಲ್ಲೆಯ ಲಗ್ಗೆರೆ ಗ್ರಾಮದಲ್ಲಿ ನಗರ ಭೂ ಮಿತಿ (Urban Land Ceiling) ಕಾನೂನಿನ ಅಡಿ ಕಳೆದುಕೊಂಡ ಭೂಮಿಯ ವಿಸ್ತೀರ್ಣದ ಬಗ್ಗೆ ಸುಳ್ಳು ಮಾಹಿತಿಗಳನ್ನು ನೀಡಿ, ಭಾರಿ ಪ್ರಮಾಣದ ಲಾಭವನ್ನು ಮಾಡಿಕೊಂಡಿರುವವರ ಹಾಗೂ ಇದಕ್ಕೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಡಿ.ಸಿ. ತಮ್ಮಣ್ಣ, ಎಂ. ಅಶ್ವಿನ್ ಕುಮಾರ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ಕೆ. ಮಹದೇವ ಹಾಗೂ ಇತರರು** – ಬಿ.ಎಂ.ಎಸ್. ಶಿಕ್ಷಣ ಸಂಸ್ಥೆಯ ಟ್ರಸ್ಟಿಗಳ ನೇಮಕ ಹಾಗೂ ಸಂಸ್ಥೆಯ ಅಧೀನದಲ್ಲಿರುವ ಕಾಲೇಜುಗಳ ವಿವಿಧ ಹುದ್ದೆಗಳ ನೇಮಕಾತಿ, ಪ್ರವೇಶ ಪ್ರಕ್ರಿಯೆ, ಶಿಕ್ಷಣ ಶುಲ್ಕ ವಸೂಲಾತಿ ಹಾಗೂ ಜಮೀನಿನಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

3) **ಶ್ರೀಯುತರುಗಳಾದ ಪಿ.ಟಿ. ಪರಮೇಶ್ವರ ನಾಯಕ್, ಪ್ರಿಯಾಂಕ ಖರ್ಗೆ ಹಾಗೂ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಇವರುಗಳು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಅನುದಾನವನ್ನು ವಿಶೇಷ ಅನುದಾನ ನೆಪದಲ್ಲಿ ಪ್ರಭಾವಿ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

4) **ಶ್ರೀಯುತರುಗಳಾದ ಜೆ.ಎನ್. ಗಣೇಶ, ಪ್ರಿಯಾಂಕ ಖರ್ಗೆ, ಕೆ. ರಾಘವೇಂದ್ರ ಬಸವರಾಜ ಹಿಟ್ನಾಳ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ರಿಜ್ವಾನ್ ಅರ್ಷದ್, ಅನಿಲ್ ಚಿಕ್ಕಮಾದು ಹಾಗೂ ಇತರರು** – ಪರಿಶಿಷ್ಟ ಪಂಗಡ ಜಾತಿಗೆ 7.5 ಮೀಸಲಾತಿ ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

5) **ಶ್ರೀಯುತರುಗಳಾದ ಕೆ.ಎಸ್. ಲಿಂಗೇಶ್, ಕೆ. ಮಹದೇವ, ಹೆಚ್.ಕೆ. ಕುಮಾರಸ್ವಾಮಿ ಹಾಗೂ ಎ.ಟಿ. ರಾಮಸ್ವಾಮಿ ಇವರುಗಳು** – ಹಾಸನ ಜಿಲ್ಲೆಯ ಬೇಲೂರು, ಆಲೂರು ಹಾಗೂ ಸಕಲೇಶಪುರ ತಾಲ್ಲೂಕುಗಳಲ್ಲಿ ಕಾಡಾನೆಗಳ ಹಾವಳಿಯಿಂದ ಆಗುತ್ತಿರುವ ಬೆಳೆ ಹಾನಿ ಹಾಗೂ ಪ್ರಾಣಹಾನಿ ಆಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

... 4/

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ. ರಘುಪತಿ ಭಟ್, ಶ್ರೀ ಬಸನಗೌಡ ರಾಮನಗೌಡ ಪಾಟೀಲ (ಯತ್ನಾಳ್), ಶ್ರೀ ಸಂಜೀವ ಮಠಂದೂರು ಹಾಗೂ ಇತರರು** – ರಾಜ್ಯದ ವಕ್ಫ್ ಬೋರ್ಡ್‌ನಲ್ಲಿ ನಡೆದ ಭ್ರಷ್ಟಾಚಾರ, ಹಣ ಹಾಗೂ ವಕ್ಫ್ ಆಸ್ತಿ ದುರುಪಯೋಗದ ಕುರಿತು ನೀಡಿರುವ ಅನ್ವರ್ ಮಾನಿಪ್ಪಾಡಿ ವರದಿಯ ಬಗ್ಗೆ ನ್ಯಾಯಾಲಯದ ಸೂಚನೆಯಂತೆ ವಿಧಾನಮಂಡಲದಲ್ಲಿ ಚರ್ಚಿಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

2) **ಶ್ರೀ ನಾಗನಗೌಡ ಕಂದಕೂರು ಅವರು** – ಗುರುಮಿಠಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಕೇಂದ್ರ ರಸ್ತೆ ನಿಧಿ ಯೋಜನೆಯಡಿ ರಾಷ್ಟ್ರೀಯ ಹೆದ್ದಾರಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ರಾಜ್ಯ ಹೆದ್ದಾರಿ–126 ಎ.ಪಿ. ಬಾರ್ಡರ್ ಘುಟ್‌ಪಾಕ್‌ನಿಂದ ಹಂದರಕಿ ಕ್ರಾಸ್‌ವರೆಗಿನ ಅಪೂರ್ಣಗೊಂಡಿರುವ ರಸ್ತೆ ಕಾಮಗಾರಿಯನ್ನು ಯಥಾಸ್ಥಿತಿಯಲ್ಲಿ ಮೊಟಕುಗೊಳಿಸಿ, ಲೋಕೋಪಯೋಗಿ ಇಲಾಖೆ ಅನುದಾನದಡಿಯಲ್ಲಿ ಬಾಕಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಯಗಚಿ ಹಿನ್ನೀರಿನಿಂದ ಬಾದಿತವಾಗಿರುವ ಬೇಲೂರು ತಾಲ್ಲೂಕಿನ ಮಾಸುವಳ್ಳಿ ಮತ್ತು ನಾರಾಯಣಪುರ ಗ್ರಾಮಗಳನ್ನು ಸ್ಥಳಾಂತರ ಮಾಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

4) **ಶ್ರೀ ಉದಯ ಬಿ. ಗರುಡಾಚಾರ್ ಅವರು** – ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಕಲಾಸಿಪಾಳ್ಯದಲ್ಲಿ ಸ್ಥಗಿತಗೊಂಡಿರುವ ಆಧುನಿಕ ಬಸ್ ಟರ್ಮಿನಲ್ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಿ, ಸಾರ್ವಜನಿಕರ ಸೇವೆಗೆ ದೊರಕಿಸಿಕೊಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಹೆಚ್.ಪಿ. ಮಂಜುನಾಥ್ ಅವರು** – ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಸರ್ಕಾರದಿಂದ ಜಮೀನು ಮಂಜೂರಾತಿ ಪಡೆದ ನಿವೃತ್ತ ಸೈನಿಕರಿಗೆ ಹಾಗೂ ಕಳೆದ 40 ವರ್ಷಗಳಿಗೂ ಹೆಚ್ಚು ವರ್ಷಗಳಿಂದ ಸ್ವಾಧೀನಾನುಭವವಿರುವ, ಅಕ್ರಮ–ಸಕ್ರಮ ಸಮಿತಿಯಿಂದ ಜಮೀನು ಮಂಜೂರಾದ ರೈತರ ಮಧ್ಯೆ ಉಂಟಾಗುತ್ತಿರುವ ಕಾನೂನಾತ್ಮಕ ಘರ್ಷಣೆಯಿಂದ ರೈತರ ಶಾಂತಿಯುತ ಕೃಷಿ ಹಾಗೂ ಸ್ವಾಧೀನಾನುಭವಕ್ಕೆ ಧಕ್ಕೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ.ಜಿ. ಬೋಪಯ್ಯ ಮತ್ತು ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ ಅವರುಗಳು** – ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಹಲವು ವರ್ಷಗಳಿಂದ ಸರ್ಕಾರಿ ಜಮೀನಿನಲ್ಲಿ ಕಾಫಿ ಕೃಷಿಯನ್ನು ಮಾಡಿಕೊಂಡಿರುವವರಿಗೆ ಅಕ್ರಮ–ಸಕ್ರಮ ಯೋಜನೆಯಡಿ ಸಾಗುವಳಿ ಚೀಟಿ ನೀಡಲು ಸಾಧ್ಯವಾಗದೇ ಇರುವುದರಿಂದ ಕಾಫಿ ಬೆಳೆಗಾರರಿಗೆ ಸದರಿ ಜಮೀನನ್ನು ಲೀಜ್‌ಗೆ ಕೊಡಲು ಶೀಘ್ರವಾಗಿ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

... 5/

7) **ಶ್ರೀ ನಿಸರ್ಗನಾರಾಯಣಸ್ವಾಮಿ ಎಲ್.ಎನ್. ಅವರು** – ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೇವನಹಳ್ಳಿ ಹಾಗೂ ವಿಜಯಪುರ ಪುರಸಭೆ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ಸಂಪೂರ್ಣವಾಗಿ ಹಾಳಾಗಿರುವ ರಸ್ತೆಗಳು ಹಾಗೂ ಮೋರಿಗಳನ್ನು ಶೀಘ್ರವಾಗಿ ಅಭಿವೃದ್ಧಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರು** – ಉಡುಪಿ ಜಿಲ್ಲೆಯಲ್ಲಿರುವ ಒಂದೇ ಮೆಡಿಕಲ್ ಕಾಲೇಜು ಆಸ್ಪತ್ರೆಯವರು ಆಯುಷ್ಮಾನ್ ಭಾರತ್ ಯೋಜನೆಗೆ ಸೀಮಿತ ಬೆಡ್‌ಗೆ ಮಂಜೂರಾತಿ ಪಡೆದುಕೊಂಡಿರುವುದರಿಂದ ಹೆಚ್ಚಿನ ಬಡರೋಗಿಗಳು ಈ ಯೋಜನೆಯಲ್ಲಿ ಚಿಕಿತ್ಸೆಯನ್ನು ಪಡೆಯಲು ವಂಚಿತರಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ಗೌರಿಬಿದನೂರಿನ ನಗರಸಭೆಯ ವ್ಯಾಪ್ತಿಯಲ್ಲಿ ಕರ್ನಾಟಕ ಗೃಹ ಮಂಡಳಿಯ ವತಿಯಿಂದ ನಿರ್ಮಿಸಿರುವ ಮನೆಗಳಲ್ಲಿ 55 ವರ್ಷಗಳಿಂದ ವಾಸಿಸುತ್ತಿರುವವರಿಗೆ ಕುಣಿಗಲ್ ಮತ್ತು ಕೆ.ಜಿ.ಎಫ್ ಮತ್ತಿತರ ಕಡೆಗಳಲ್ಲಿ ಸರ್ಕಾರ ನಿಗದಿಪಡಿಸಿರುವ ದರದಲ್ಲಿ ಹಸ್ತಾಂತರ ಮಾಡಿರುವ ರೀತಿಯಲ್ಲಿಯೇ ಹಂಚಿಕೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಂಜೀವ ಮಠಂದೂರು ಅವರು** – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು ಆನೆಮಹಲು–ಮಾರನಹಳ್ಳಿ ಮಧ್ಯೆ ರಾಷ್ಟ್ರೀಯ ಹೆದ್ದಾರಿಯನ್ನು ದುರಸ್ತಿ ಮಾಡಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ರಾಜಾ ವೆಂಕಟಪ್ಪ ನಾಯಕ್ ಅವರು** – ತುಂಗಭದ್ರ ಎಡದಂಡೆ ಮುಖ್ಯ ಕಾಲುವೆಯ ಮೈಲು–69ರಲ್ಲಿ ನಿರ್ವಹಣೆ ಮಾಡಲಾಗುತ್ತಿರುವ ಎರಡು ಗೇಜ್‌ಗಳ ಬದಲಾಗಿ ಕೇವಲ ಒಂದೇ ಗೇಜ್ ನಿರ್ವಹಣೆ ಮಾಡುತ್ತಿರುವುದರಿಂದ ಟೇಲ್‌ಎಂಡ್ ಪ್ರದೇಶವಾಗಿರುವ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿನ ರೈತರ ಜಮೀನುಗಳಿಗೆ ಸರಿಯಾಗಿ ನೀರು ಪೂರೈಕೆಯಾಗದೇ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

12) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮಂಗಳೂರು ನಗರ ಸುರತ್ಕಲ್ ಮತ್ತು ಗುರುಪುರ ಹೋಬಳಿ ವ್ಯಾಪ್ತಿಯ ಆಟೋ ರಿಕ್ಷಾ ಮೀಟರುಗಳ ಪ್ರಮಾಣ ಪತ್ರಗಳನ್ನು ಈ ಹಿಂದಿನಂತೆ ಮಂಗಳೂರಿನಲ್ಲಿರುವ ಕಾನೂನು ಮಾಪನಶಾಸ್ತ್ರ ನಿರೀಕ್ಷಕರ ಕಛೇರಿಯಲ್ಲಿಯೇ ಮುದ್ರಿಸಿ ಆಟೋ ರಿಕ್ಷಾ ಚಾಲಕರಿಗೆ ನೀಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

13) **ಶ್ರೀ ಸಿದ್ದರಾಮಯ್ಯ, ಶ್ರೀ ಬಿ.ಎಸ್. ಸುರೇಶ, ಶ್ರೀ ಬಿ. ಶಿವಣ್ಣ ಹಾಗೂ ಇತರರು** – ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕಿನ ಸರ್ಜಾಪುರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್‌ರವರ ದುರ್ವರ್ತನೆ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

14) **ಶ್ರೀ ಕೃಷ್ಣ ಬೈರೇಗೌಡ ಅವರು** – ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಶಿಡ್ಲಘಟ್ಟ ಮತ್ತು ಚಿಂತಾಮಣಿ ತಾಲ್ಲೂಕು ವ್ಯಾಪ್ತಿಯಲ್ಲಿನ ವಿವಿಧ ಗ್ರಾಮಗಳ ಫಲವತ್ತಾದ ಜಮೀನುಗಳನ್ನು ಮಸ್ತೇನಹಳ್ಳಿ ಕೈಗಾರಿಕೆ ಪ್ರದೇಶದ ಮೂರನೇ ಹಂತಕ್ಕಾಗಿ ರೈತರಿಂದ ಬಲವಂತವಾಗಿ ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

15) **ಶ್ರೀ ದೇವಾನಂದ ಫುಲಸಿಂಗ್ ಚವ್ಹಾಣ್ ಅವರು** – ನಾಗಠಾಣ ವಿಧಾನ ಸಭಾ ಕ್ಷೇತ್ರದ ಚಡಚಣ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಭೀಮಾ ನದಿ ಪ್ರವಾಹದಿಂದ ಬಾದಿತರಾದ ನೆರೆ ಸಂತ್ರಸ್ತರಿಗೆ ಪುನರ್ವಸತಿ ಕಲ್ಪಿಸುವ ಉದ್ದೇಶದಿಂದ ನಿರ್ಮಿಸಲಾಗಿರುವ ಮನೆಗಳ ಹಕ್ಕುಪತ್ರ ವಿತರಣೆಯಲ್ಲಿ ಉಂಟಾಗಿರುವ ಗೊಂದಲವನ್ನು ಸರಿಪಡಿಸಲು ಕೈಗೊಂಡ ಕ್ರಮಗಳ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

16) **ಶ್ರೀಮತಿ ಕುಸುಮಾವತಿ ಚನ್ನಬಸಪ್ಪ ಶಿವಳ್ಳಿ ಅವರು** – ಕುಂದಗೋಳ ವಿಧಾನ ಸಭಾ ಕ್ಷೇತ್ರದ ಸಂಶಿ ಗ್ರಾಮದ ಪುರಾತನ ಗುಹೆಯು ಭಾರಿ ಮಳೆಯಿಂದ ಕುಸಿದು ಬೀಳುತ್ತಿದ್ದು, ಅದರ ಮೇಲ್ಭಾಗದಲ್ಲಿ ವಾಸವಾಗಿರುವ ಕುಟುಂಬಗಳನ್ನು ಸ್ಥಳಾಂತರ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಸ್. ರಾಮಪ್ಪ ಅವರು – ಶಾಲಾ ಕಟ್ಟಡಗಳ ದುರಸ್ತಿ ಬಗ್ಗೆ ದಿನಾಂಕ: 14.09.2021ರಂದು ನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 58(500)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm